# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸರ್ವಜ್ಞನಗರ ವಿಧಾನ ಸಭಾಕ್ಷೇತ್ರದ ವ್ಯಾಪ್ತಿಗೆ ಒಳಪಡುವ ವಾರ್ಡ್ ಸಂಖ್ಯೆ.30 ಕಾಡುಗೊಂಡನಹಳ್ಳಿಗೆ ಸಂಬಂಧಿಸಿದಂತೆ ದಿನಾಂಕ: 04-06-2022 ರಂದು ಶ್ರೀ.ವೆಂಕಟ ದುರ್ಗಾ ಪ್ರಸಾದ್ ಕುಂಚಾಲ ನೋಡಲ್ ಅಧಿಕಾರಿಗಳು ಇವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಮತ್ತು ವಿಪತ್ತು ನಿರ್ವಹಣಾ ಸಮಿತಿ ಸಭೆಯ ನಡಾವಳಿಗಳು.

ಸಭೆಯಲ್ಲಿ ಹಾಜರಿದ್ದವರ ವಿವರ:-

| ಕ್ರಮ ಸಂಖ್ಯೆ | ಅಧಿಕಾರಿಗಳ ಹೆಸರು | ಪದನಾಮ |
|---|---|---|
| 1 | ಶ್ರೀ.ವೆಂಕಟ ದುರ್ಗಾ ಪ್ರಸಾದ್ ಕುಂಚಾಲ. | ಜಂಟಿ ನಿರ್ದೇಶಕರು (ನಗರಯೋಜನೆ-ಸ್ಕ್ವಾಡ್) ಹಾಗೂ ನೋಡಲ್‌ಅಧಿಕಾರಿ& ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಂಖ್ಯೆ-30 ಕೆ.ಜಿ.ಹಳ್ಳಿ |
| 2 | ಶ್ರೀ.ಹರ್ಷಿತ್ ಕುಮಾರ್ | ಸಹಾಯಕ ಅಭಿಯಂತರರು, & ಸದಸ್ಯ ಕಾರ್ಯದರ್ಶಿಗಳು ವಾರ್ಡ್ ಸಮಿತಿ ವಾರ್ಡ್ ಸಂಖ್ಯೆ.30. ಕೆ.ಜಿ.ಹಳ್ಳಿ. |
| 3 | ಶ್ರೀ.ಕೆ.ವಿ.ವಿಧೇಯ | ಸಹಾಯಕ ಅಭಿಯಂತರರು ಬೆಸ್ಕಾಂ ವಿಭಾಗ |
| 4 | ಶ್ರೀ.ಚಾಮರಾಜ್ | ಎ.ಎಸ್.ಐ ಅಧಿಕಾರಿಗಳು ಕೆ.ಜಿ.ಹಳ್ಳಿ ಪೊಲೀಸ್ ಠಾಣೆ |
| 5 | ಶ್ರೀ.ಸಾಹೇಬ್ ಪಟೇಲ್ | ಕಾನ್ಸ್‌ಟೇಬಲ್ ಕೆ.ಜಿ.ಹಳ್ಳಿ ಪೊಲೀಸ್ ಠಾಣೆ |
| 6 | ಶ್ರೀ.ಕೆ.ರಮೇಶ್ | ಕೆಲಸ ಪರಿವೀಕ್ಷಕರು ಬೆಸ್ಕಾಂ ವಿಭಾಗ |
| 7 | ಶ್ರೀ.ಸತೀಶ್.ಬಿ | ಕಿರಿಯ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ |
| 8 | ಶ್ರೀ.ಮಂಜುನಾಥ್ | ಕೆಲಸ ಪರಿವೀಕ್ಷಕರು ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ |
| 9 | ಶ್ರೀ.ಎಸ್.ರಾಜರಾಮ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾ-30 |
| 10 | ಶ್ರೀ.ಸುರೇಶ್ | ಕಿರಿಯ ಆರೋಗ್ಯ ಪರಿವೀಕ್ಷಕರು. ವಾ-30 |
| 11 | ಶ್ರೀ.ಯೋಗೇಶ್ | ಮಾರ್ಷಲ್ |
| 12 | ಶ್ರೀ.ಫಹೀಮ್ ಖಾನ್ | ಅಲ್ಪಸಂಖ್ಯಾತರ ಅಧ್ಯಕ್ಷರು |
| 13 | ಶ್ರೀ.ಎರ್ರನ್ ಕುಮಾರ್ | ಸ್ಥಳೀಯರು |

| | | |
|---|---|---|
| 14 | ಶ್ರೀ.ವಿನೋದ್ | ಸ್ಥಳೀಯರು |
| 15 | ಶ್ರೀ.ಜೈದೇವ್ ಪ್ರಕಾಶ್ | ಸ್ಥಳೀಯರು |
| 16 | ಶ್ರೀ.ಎಷಾನ್ | ಸ್ಥಳೀಯರು |

ವಾರ್ಡ್ ಸಮಿತಿಯ ನೋಡಲ್ ಅಧಿಕಾರಿ ರವರು ಮತ್ತು ಸದಸ್ಯ ಕಾರ್ಯದರ್ಶಿ ರವರು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳನ್ನು, ಸಂಘ ಸಂಸ್ಥೆಗಳ ಪ್ರತಿನಿಧಿಗಳನ್ನು ಹಾಗೂ ಸಾರ್ವಜನಿಕರನ್ನು ಸ್ವಾಗತಿಸುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

**1) ಘನತ್ಯಾಜ್ಯ ನಿರ್ವಹಣೆ:-** ಕೆ.ಜಿ.ಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿನ ಪಾರಿಜಾತ ಶಾಲೆ ಎದುರು ಸಾರ್ವಜನಿಕರು ಘನತ್ಯಾಜ್ಯವನ್ನು ಸುರಿಯುತ್ತಿದ್ದಾರೆಂದು ಶ್ರೀ.ಎರ್ರನ್ ರವರು ತಿಳಿಸಿರುತ್ತಾರೆ . ದಿನಾಂಕ: 21.05.2022 ರಂದು ನಡೆದ ವಾರ್ಡ್ ಸಮಿತಿ ಸಭೆಯಲ್ಲಿ ನೋಡಲ್ ಅಧಿಕಾರಿರವರು ಸೂಚಿಸಿದಂತೆ ಪೌರ ಕಾರ್ಮಿಕರಿಗೆ ಹ್ಯಾಂಡ್ ಗ್ಲೌಸ್ ಒದಗಿಸಲಾಗಿದೆ ಎಂದು ಶ್ರೀ.ಸುರೇಶ್ ರವರು ತಿಳಿಸಿರುತ್ತಾರೆ.

ಸದರಿ ವಿಷಯದ ಬಗ್ಗೆ ಶ್ರೀ.ಸುರೇಶ್, ಹಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಕ್ರಮ ಕೈಗೊಳ್ಳುವಂತೆ ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.

**(ಕ್ರಮ :-ಸ.ಕಾ.ಅ ಘನತ್ಯಾಜ್ಯ ನಿರ್ವಹಣೆ ಸರ್ವಜ್ಞನಗರ ವಿಭಾಗ ಬೆಂಗಳೂರು)**

**2) ಬೀದಿ ದೀಪಗಳ ನಿರ್ವಹಣೆ ಬಗ್ಗೆ:-** ಕೆ.ಜಿ.ಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿನ, ಪಿಳ್ಳಣ್ಣಗರ್ಡನ್ 6ನೇ ಮುಖ್ಯರಸ್ತೆ, 2ನೇ ಮುಖ್ಯರಸ್ತೆ, 7ನೇ ಅಡ್ಡರಸ್ತೆಯಲ್ಲಿ ಬೀದಿ ದೀಪಗಳ ಪ್ಯಾನಲ್ ಬೋರ್ಡ್‌ಗಳು ದುಸ್ಥಿತಿಯಲ್ಲಿದ್ದು, ಅವುಗಳನ್ನು ದುರಸ್ಥಿಪಡಿಸಲು ಶ್ರೀ.ಎರ್ರನ್ ರವರು ಸಭೆಯಲ್ಲಿ ತಿಳಿಸಿರುತ್ತಾರೆ.

ಸದರಿ ವಿಷಯದ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ವಿಭಾಗ ಬಿ.ಬಿ.ಎಂ.ಪಿ ರವರಿಗೆ ಕ್ರಮ ಕೈಗೊಳ್ಳುವಂತೆ ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.

**(ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ವಿಭಾಗ ಬಿ.ಬಿ.ಎಂ.ಪಿ)**

**3) ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ ಬಗ್ಗೆ (ಬಿ.ಡಬ್ಲ್ಯೂ.ಎಸ್.ಎಸ್.ಬಿ):-** ಕೆ.ಜಿ.ಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿನ ಪಿಳ್ಳಣ್ಣಗಾರ್ಡನ್‌ನಲ್ಲಿ ಚರಂಡಿಯಲ್ಲಿನ ಹೂಳನ್ನು ತೆಗೆದು, ಚರಂಡಿ ಗೋಡೆಗಳ ಪ್ಲಾಸ್ಟರಿಂಗ್ ಕೆಲಸವನ್ನು ಮಾಡದೇ ಹಾಗೆಯೇ ಬಿಟ್ಟಿರುವುದರಿಂದ ಇಲಿ ಮತ್ತು ಹೆಗ್ಗಣಗಳು ಮಣ್ಣು ಕೊರೆದು ಮನೆಯೊಳಗೆ ಬರುತ್ತಿವೆಯೆಂದು ಶ್ರೀ.ಫಹೀಮ್‌ಖಾನ್ ರವರು ತಿಳಿಸಿರುತ್ತಾರೆ ಹಾಗೂ ಟೆಲಿಗ್ರಾಫಿಕ್ ಸ್ಟ್ರೀಟ್‌ನಲ್ಲಿ ಹೊಸ ಡ್ರೈನೇಜ್ ಪೈಪ್‌ಗಳನ್ನು ಅಳವಡಿಸಲು ಶ್ರೀ.ಎರ್ರನ್ ರವರು ಕೋರಿರುತ್ತಾರೆ.

ಸದರಿ ವಿಷಯದ ಬಗ್ಗೆ ಸಭೆಯಲ್ಲಿ ಹಾಜರಿದ್ದ ಶ್ರೀ.ಸತೀಶ್.ಟಿ, ಕಿರಿಯ ಅಭಿಯಂತರರು ಮತ್ತು ಶ್ರೀ.ಮಂಜುನಾಥ್, ಕೆಲಸ ಪರಿವೀಕ್ಷಕರು ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಕ್ರಮ ಕೈಗೊಂಡು ಮುಂದಿನ ಸಭೆಯಲ್ಲಿ ಮಾಹಿತಿ ಸಲ್ಲಿಸಬೇಕೆಂದು ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.

**(ಕ್ರಮ :- ಸ.ಕಾ.ಅ.ಬಿ.ಡಬ್ಲ್ಯೂ.ಎಸ್.ಎಸ್.ಬಿ ಉಪ-ವಿಭಾಗ, ಫ್ರೇಜರ್‌ಟೌನ್)**

4) **ಪಶು ಸಂಗೋಪನೆ ಇಲಾಖೆ:-** ಕೆ.ಜಿ.ಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿನ ವೆಂಕಟೇಶಪುರಂ ಹಾಗೂ ಪಿಳ್ಳಣ್ಣಗಾರ್ಡನ್‌ನಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದ್ದು, ಇತ್ತೀಚೆಗೆ ಸುಮಾರು 12 ವರ್ಷದ ಬಾಲಕನಿಗೆ ಬೀದಿ ನಾಯಿಗಳು ಕಚ್ಚಿರುವುದಾಗಿ ಶ್ರೀ.ಫಹೀಮ್ ರವರು ಸಭೆಯಲ್ಲಿ ತಿಳಿಸಿರುತ್ತಾರೆ. ಹಾಗೂ ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಕೂಡಲೇ ಕ್ರಮ ಕೈಗೋಳುವಂತೆ ಸಭೆಯಲ್ಲಿ ಕೋರಿರುತ್ತಾರೆ.

ಸದರಿ ವಿಷಯದ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳುವಂತೆ ವಾರ್ಡ್‌ನ ನೋಡಲ್ ಅಧಿಕಾರಿರವರು ಸೂಚಿಸಿರುತ್ತಾರೆ.

**(ಕ್ರಮ:- ಪಶು ಸಂಗೋಪನೆ ಇಲಾಖೆ ಬಿ.ಬಿ.ಎಂ.ಪಿ)**

5) **ಕಾಮಗಾರಿ ಇಲಾಖೆ:-** ವಾರ್ಡ್ ವ್ಯಾಪ್ತಿಯಲ್ಲಿನ ವಿನೋಭನಗರ ಹಾಗೂ ಬಿ.ಎಂ.ಲೇಔಟ್‌ನಲ್ಲಿ ರಸ್ತೆ ಗುಂಡಿಗಳು ಹಾಗೂ ಅನಧಿಕೃತವಾಗಿ ರಸ್ತೆ ಅಗೆತ ಮಾಡಿ ರಸ್ತೆ ಗುಂಡಿಗಳು ಮುಚ್ಚದೇ ಇರುವುದರಿಂದ ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ತೊಂದರೆಯಾಗುತ್ತಿರುವ ವಿಷಯವನ್ನು ಕಳೆದ ಸಭೆಯಲ್ಲಿ ತಿಳಿಸಲಾಗಿದ್ದು, ಸದರಿ ರಸ್ತೆಯ ಎಲ್ಲಾ ರಸ್ತೆ ಗುಂಡಿಗಳನ್ನು ಮುಚ್ಚಿರುವುದಾಗಿ ಹಾಗೂ ಒಳಚರಂಡಿಗಳ ಹೂಳು ತೆಗೆಯುವ ಕೆಲಸ ಆಧ್ಯತೆಯ ಮೇರೆಗೆ ಮಾಡುತ್ತಿರುವುದಾಗಿ ವಾರ್ಡ್‌ನ ಸಹಾಯಕ ಅಭಿಯಂತರರು ಸಭೆಯಲ್ಲಿ ತಿಳಿಸಿರುತ್ತಾರೆ.

6) **ಬೆಸ್ಕಾಂ ವಿಭಾಗ:-** ವಾರ್ಡ್ ವ್ಯಾಪ್ತಿಯ ಹಿಂದೂ ರುದ್ರಭೂಮಿ ಹಿಂಭಾಗದಲ್ಲಿ ಅಳವಡಿಸಲಾಗಿರುವ ಟ್ರಾನ್ಸ್‌ಫಾರ್ಮರ್‌ಗಳು ದುಸ್ಥಿತಿಯಲ್ಲಿದ್ದು, ಪದೇ ಪದೇ ಹಾಳಾಗುತ್ತಿದ್ದು, ಅವುಗಳನ್ನು ಬದಲಾಯಿಸಬೇಕೆಂದು ಶ್ರೀ.ಎರ್ರನ್ ಕುಮಾರ್ ರವರು ಸಭೆಯಲ್ಲಿ ತಿಳಿಸಿರುತ್ತಾರೆ.

ಅದರಂತೆ ಸದರಿ ವಿಷಯದ ಬಗ್ಗೆ ಸ್ಥಳ ಪರಿಶೀಲಿಸಿ ಆದ್ಯತೆಯ ಮೇರೆಗೆ ಕ್ರಮ ಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಶ್ರೀ.ಕೆ.ವಿ.ವಿಧೇಯ ಸಹಾಯಕ ಅಭಿಯಂತರರು, ಬೆಸ್ಕಾಂ ವಿಭಾಗ ರವರಿಗೆ ವಾರ್ಡ್‌ನ ನೋಡಲ್ ಅಧಿಕಾರಿರವರು ಸೂಚಿಸಿರುತ್ತಾರೆ.

**(ಕ್ರಮ:- ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ ವಿಭಾಗ ಬಿ.ಬಿ.ಎಂ.ಪಿ)**

7) **ಅರಣ್ಯ ಇಲಾಖೆ:-** ಕೆ.ಜಿ.ಹಳ್ಳಿ ವಾರ್ಡ್ ವ್ಯಾಪ್ತಿಯ ಪಿಳ್ಳಣ್ಣಗಾರ್ಡನ್ 5ನೇ ಮುಖ್ಯರಸ್ತೆ, ದೇವರಾಜ್ ಅರಸ್ ರಸ್ತೆ, ಟೆಲಿಗ್ರಾಫ್ ಸ್ಟ್ರೀಟ್‌ನಲ್ಲಿ 2 ಮರಗಳು ಬೀಳುವ ಸ್ಥಿತಿಯಲ್ಲಿದ್ದು, ಮರಗಳನ್ನು ತೆರವುಗೊಳಿಸಲು ಹಾಗೂ ಪಿಳ್ಳಣ್ಣಗಾರ್ಡನ್ ಪ್ರದೇಶದ ಹಲವು ರಸ್ತೆಗಳಲ್ಲಿ ಮರಗಳ ಕೊಂಬೆಗಳನ್ನು ಕತ್ತರಿಸಲು ಶ್ರೀ.ಎರ್ರನ್ ರವರು ಸಭೆಯಲ್ಲಿ ತಿಳಿಸಿರುತ್ತಾರೆ. ಈ ಬಗ್ಗೆ ಈ ಹಿಂದೆ ಹಲವಾರು ಬಾರಿ ಸಭೆಯಲ್ಲಿ ಸೂಚಿಸಿದರೂ ಸಹ ಯಾವುದೇ ಕ್ರಮ ಕೈಗೊಂಡಿಲ್ಲವೆಂದು ಶ್ರೀ.ಎರ್ರನ್ ರವರು ತಿಳಿಸಿರುತ್ತಾರೆ.

ಸದರಿ ವಿಷಯದ ಬಗ್ಗೆ ಅರಣ್ಯ ಇಲಾಖೆ ರವರಿಗೆ ಕ್ರಮ ಕೈಗೊಂಡು ಮುಂದಿನ ಸಭೆಯಲ್ಲಿ ವರದಿಯೊಂದಿಗೆ ಹಾಜರಾಗಲು ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.

**(ಕ್ರಮ:- ವಲಯ ಅರಣ್ಯಾಧಿಕಾರಿಗಳು ಪೂರ್ವ ಬಿ.ಬಿ.ಎಂ.ಪಿ)**

9) **ಕಾನೂನು ಸುವ್ಯವಸ್ಥೆ (ಪೊಲೀಸ್ ಇಲಾಖೆ)-** ಕೆ.ಜಿ.ಹಳ್ಳಿ ವಾರ್ಡ್ ವ್ಯಾಪ್ತಿಯ ವಿನೋಭನಗರ 10ನೇ ಅಡ್ಡರಸ್ತೆಯ ರೈಲ್ವೆ ಹಳಿ ಸಮೀಪದಲ್ಲಿ ಸಾರ್ವಜನಿಕರ ಓಡಾಟ ಕಡಿಮೆಯಿದ್ದು, ಆ ಜಾಗದಲ್ಲಿ ಕೆಲವು ಕಿಡಿಗೇಡಿಗಳು ಮಾದಕ ವಸ್ತುಗಳ ಸೇವನೆಯನ್ನು ಮಾಡುತ್ತಿರುವುದು ಹಾಗೂ ಕಾನೂನು ಬಾಹಿರ ಚಟುವಟಿಕೆಗಳನ್ನು ನಡೆಸುತ್ತಿರುವುದು ಸಾರ್ವಜನಿಕರು ತಿಳಿಸಿರುತ್ತಾರೆ. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ನಿಯಮಿತವಾಗಿ ಹೊಯ್ಸಳ ವಾಹನವನ್ನು ಪ್ಯಾಟ್ರೋಲಿಂಗ್ ಮಾಡುವಂತೆ ಹಾಗೂ ವಾರ್ಡ್‌ನಲ್ಲಿ 3 ಪೋಲೀಸ್ ಚೌಕಿಗಳನ್ನು ನಿರ್ಮಿಸಿ ಕ್ರಮಕೈಗೊಳ್ಳುವಂತೆ ಹಾಗೂ ಮಾದಕ ವಸ್ತುಗಳ ಸೇವನೆಯನ್ನು ಮಾಡುತ್ತಿರುವವರಿಗೆ ಎನ್.ಜಿ.ಓ ಗಳ ಮೂಲಕ ಅವರ ದುಷ್ಚಟವನ್ನು ಬಿಡಿಸಲು ಸಹಾಯ ಮಾಡುವಂತೆ ಹಾಗೂ ಸೂಕ್ತ ಕ್ರಮ ಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಶ್ರೀ.ಚಾಮರಾಜ್, ಎ.ಎಸ್.ಐ ಅಧಿಕಾರಿಗಳು ರವರಿಗೆ ವಾರ್ಡನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ

**(ಕ್ರಮ: ಆರಕ್ಷಕ ವೃತ್ತ ನಿರೀಕ್ಷಕರು ಕೆ.ಜಿ.ಹಳ್ಳಿ ಪೊಲೀಸ್ ಠಾಣೆ)**

ಮುಂದುವರೆದು ದಿನಾಂಕ: 04.06.2022 ರಂದು ವಾರ್ಡ್ ಸಮಿತಿ ಸಭೆಗೆ ಗೈರು ಹಾಜರಾಗಿರುವ ಸಂಚಾರಿ ಪೊಲೀಸ್ ಇಲಾಖೆ, ತೋಟಗಾರಿಕೆ ಇಲಾಖೆ ಅಧಿಕಾರಿಗಳು ಹಾಗೂ ಯಾವುದೇ ವಾರ್ಡ್ ಸಮಿತಿ ಸಭೆಗೆ ಹಾಜರಾಗಿರದ ಅರಣ್ಯ ಇಲಾಖೆಯ ಅಧಿಕಾರಿಗಳನ್ನು ಮುಂದಿನ ವಾರ್ಡ್ ಸಮಿತಿ ಸಭೆಗೆ ಅಧಿಕಾರಿಗಳು ತಪ್ಪದೇ ಹಾಜರಾಗಲು ತಿಳಿಸಲಾಗಿದೆ. ತಪ್ಪಿದ್ದಲ್ಲಿ ಮೇಲಾಧಿಕಾರಿಗಳಿಗೆ ವರದಿ ಮಾಡಲು ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.

ಸಭೆಯಲ್ಲಿ ಹಾಜರಿದ್ದ ಎಲ್ಲರನ್ನು ವಂದಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ವಂದನೆಗಳೊಂದಿಗೆ,**

ಸಹಾಯಕ ಅಭಿಯಂತರರು ಹಾಗೂ
ಸದಸ್ಯ ಕಾರ್ಯದರ್ಶಿಗಳು
ವಾರ್ಡ್ ಸಂಖ್ಯೆ.30.ಕೆ.ಜಿ.ಹಳ್ಳಿ

9/06/22

ಜಂಟಿ ನಿರ್ದೇಶಕರು (ನಗರ ಯೋಜನೆ- ಸ್ಕ್ವಾಡ್)
ಹಾಗೂ ನೋಡಲ್ ಅಧಿಕಾರಿ & ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್ ಸಂಖ್ಯೆ.30.ಕೆ.ಜಿ.ಹಳ್ಳಿ

<u>ಪ್ರತಿಯನ್ನು:</u>

1. ಮಾನ್ಯ ಶಾಸಕರು, ಸರ್ವಜ್ಞನಗರ ವಿಧಾನ ಸಭಾಕ್ಷೇತ್ರ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಕೌನ್ಸಿಲ್ ಕಾರ್ಯದರ್ಶಿಗಳು ಬಿ.ಬಿ.ಎಂ.ಪಿ ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
3. ಜಂಟಿ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ಕಾರ್ಯಪಾಲಕ ಅಭಿಯಂತರರು ಸರ್ವಜ್ಞನಗರ ವಿಭಾಗ ರವರ ಅವಗಾಹನೆಗೆ ಕಳುಹಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ ಉಪ-ವಿಭಾಗ ಪಿಳ್ಳಣ್ಣಗಾರ್ಡನ್ ಕೆ.ಜಿ.ಹಳ್ಳಿ ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು ವಿದ್ಯುತ್ ವಿಭಾಗ ಬಿ.ಬಿ.ಎಂ.ಪಿ ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ಸರ್ವಜ್ಞನಗರ ವಿಭಾಗರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು ಹೆಚ್.ಬಿ.ಆರ್ ಲೇಔಟ್ ಉಪ- ವಿಭಾಗ ಬಿ.ಬಿ.ಎಂ.ಪಿ ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ ಫ್ರೆಜರ್‌ಟೌನ್ ಉಪ-ವಿಭಾಗ ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
11. ಉಪ-ಅರಣ್ಯಾಧಿಕಾರಿಗಳು ಬಿ.ಬಿ.ಎಂ.ಪಿ ಪೂರ್ವ ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
12. ಪಶು ವೈದ್ಯಾಧಿಕಾರಿಗಳು ಬಿ.ಬಿ.ಎಂ.ಪಿ ಪೂರ್ವ ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
13. ಆರೋಗ್ಯ ವೈಧ್ಯಾಧಿಕಾರಿಗಳು ಸರ್ವಜ್ಞನಗರ ವಿಭಾಗರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
14. ಆರಕ್ಷಕ ವೃತ್ತ ನಿರೀಕ್ಷಕರು (ಕಾನೂನು ಮತ್ತು ಸುವ್ಯವಸ್ಥೆ) ಕೆ.ಜಿ.ಹಳ್ಳಿ ಪೊಲೀಸ್‌ಠಾಣೆ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
15. ಕಛೇರಿ ಕಡತಕ್ಕೆ.